# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಶುಕ್ರವಾರ, ದಿನಾಂಕ:19ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**

5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಂಜುನಾಥ್ ಭಂಡಾರಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 65(746) — ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶಶೀಲ್ ಜಿ. ನಮೋಶಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 116(1234) — ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

### 02. ಅಧಿಕೃತ ನಿರ್ಣಯಗಳು

**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:–**

1) ಕಲ್ಯಾಣ ಕರ್ನಾಟಕ ಪ್ರದೇಶದ ಬಹು ದಿನಗಳ ಬೇಡಿಕೆಯಾದ ರಾಯಚೂರು ಜಿಲ್ಲೆಯಲ್ಲಿ ತಕ್ಷಣವೇ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (AIIMS) ಅನ್ನು ಸ್ಥಾಪಿಸಲು ಭಾರತ ಸರ್ಕಾರಕ್ಕೆ ಆಗ್ರಹಿಸಲು ಮತ್ತು ಈ ಸಂಬಂಧದಲ್ಲಿ ಮುಖ್ಯಮಂತ್ರಿಯವರ ಪತ್ರಗಳು ಹಾಗೂ ನಿರಂತರ ಪ್ರಯತ್ನಗಳ ಪೂರಕವಾಗಿರುವ ನಿರ್ಣಯವನ್ನು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

2) ಕರ್ನಾಟಕದಲ್ಲಿ ಬೆಂಗಳೂರು–ಮೈಸೂರು ಪ್ರದೇಶದಲ್ಲಿ ಮಾತ್ರ ಕೇಂದ್ರಿಕೃತವಾಗಿರುವ 73 ರಾಷ್ಟ್ರೀಯ ಪ್ರಾಮುಖ್ಯತೆಯ ಕೇಂದ್ರ ಸರ್ಕಾರದ ಸಂಸ್ಥೆಗಳನ್ನು ಗುರುತಿಸಿ, ಅವುಗಳಲ್ಲಿ ಕನಿಷ್ಠ 25 ಪ್ರಮುಖ ಸಂಶೋಧನಾ ಸಂಸ್ಥೆಗಳು ಸೇರಿದಂತೆ, ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವರ್ಗಾಯಿಸಲು ಭಾರತ ಸರ್ಕಾರವನ್ನು ಆಗ್ರಹಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

3) ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 (UKP-III)ನ್ನು ತಕ್ಷಣವೇ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು, ಕೇಂದ್ರ ಅನುದಾನ ಬಿಡುಗಡೆ ಮಾಡಲು ಮತ್ತು ಕೃಷ್ಣಾ ಜಲವಿವಾದ ನ್ಯಾಯಾಧಿಕರಣ–2 (KWDT-II)ರ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆಗೆ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

4) ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ರೂ.5000 ಕೋಟಿ ಹೊಂದಾಣಿಕೆ ಅನುದಾನವನ್ನು ವಿದರ್ಭ ಅಭಿವೃದ್ಧಿ ಮಾದರಿಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡುವಂತೆ ಆಗ್ರಹಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

5) ಕರ್ನಾಟಕದಲ್ಲಿ ಕಬ್ಬು ಮತ್ತು ಇತರೆ ಕಚ್ಚಾ ವಸ್ತುಗಳನ್ನು ಆಧರಿಸಿ ಉತ್ಪಾದಿಸುವ ಎಥೆನಾಲ್ ಸಾಮರ್ಥ್ಯಕ್ಕೆ ಅನುಗುಣವಾಗಿ ತಾರತಮ್ಯ ಮಾಡದೇ ಸಮಾನವಾದ ಎಥೆನಾಲ್ ಸಂಗ್ರಹಣೆ ಪ್ರಮಾಣವನ್ನು ನಿಗದಿಪಡಿಸಿ ರೈತರ ರಕ್ಷಣೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

6) ಮಹದಾಯಿ ನ್ಯಾಯಾಧಿಕರಣದ ತೀರ್ಪಿನನ್ವಯ ಕುಡಿಯುವ ನೀರು ಪೂರೈಕೆಯ ಮಹತ್ವಾಕಾಂಕ್ಷೆಯ ಕಳಸಾ–ಬಂಡೂರಿ ನಾಲಾ ತಿರುವು ಯೋಜನೆಗೆ ಅಗತ್ಯವಿರುವ ಅರಣ್ಯ ಮತ್ತು ವನ್ಯಜೀವಿ ಮಂಡಳಿಗಳ ಅನುಮೋದನೆಗಳನ್ನು ತ್ವರಿತವಾಗಿ ಒದಗಿಸಲು ಭಾರತ ಸರ್ಕಾರದ ತುರ್ತು ಕ್ರಮಕ್ಕಾಗಿ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

## 03. ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

## 04. ನಿಯಮ 68ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ:**

| | |
|---|---|
| **ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಹಾಗೂ ಇತರರು** | ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ನಾಶಗೊಂಡ ಬೆಳೆಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಷಯದ ಕುರಿತು |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**